ಸಂಘಗಳ ಸದಸ್ಯರಿಂದ ನಿರಂತರವಾಗಿ ದೂರುಗಳು ಹಾಗೂ ಮನವಿಗಳು ಬಂದಿದ್ದರ ಹಿನ್ನೆಲೆಯಲ್ಲಿ ರಾಜ್ಯದಲ್ಲಿ ಗೃಹ ನಿರ್ಮಾಣ ಸಹಕಾರ ಸಂಘಗಳು ಸಮರ್ಪಕವಾಗಿ ಕಾರ್ಯನಿರ್ವಹಿಸುವಂತೆ ಮಾಡುವ ದೃಷ್ಟಿಯಿಂದ ಸಹಕಾರ ಸಂಘಗಳ ನಿಬಂಧಕರು ಮೇಲೆ ತಿಳಿಸಿದ ನಿರ್ದೇಶನವನ್ನು ಕರ್ನಾಟಕ ಸಹಕಾರ ಸಂಘಗಳ ಅಧಿನಿಯಮ 1959ರ ಪ್ರಕರಣ 30ಬಿ ಅಡಿಯಲ್ಲಿ ನೀಡುವುದು ಸೂಕ್ತವೆಂದು ಪರಿಗಣಿಸಿ ನಿರ್ದೇಶನ ನೀಡಿರುತ್ತಾರೆ.

ನೌಕರರ ಗೃಹ ನಿರ್ಮಾಣ ಸಹಕಾರ ಸಂಘಗಳಲ್ಲಿ ನೌಕರರಲ್ಲದವರಿಗೆ ಸಹಸದಸ್ಯತ್ವ ನೀಡಿ ನಿವೇಶನ ನೀಡಿರುವುದು ಸರ್ಕಾರದ ಗಮನಕ್ಕೆ ಬಂದಿರುತ್ತದೆ. ಈ ರೀತಿ ಸದಸ್ಯತ್ವ ನೀಡಲು ಕರ್ನಾಟಕ ಸಹಕಾರ ಸಂಘಗಳ ಅಧಿನಿಯಮ 1959ರ ಪ್ರಕರಣ 18(4)ರ ಅಡಿಯಲ್ಲಿ ಅವಕಾಶವಿರುತ್ತದೆ. ಆದರೆ, ಅಂತಹ ಸದಸ್ಯರು ಸಂಘದ ಸದಸ್ಯತ್ವ ನಡೆದ ನಂತರ ಸಂಘದ ಆಡಳಿತ ಮಂಡಳಿ ಚುನಾವಣೆಗಳಲ್ಲಿ ಮತದಾನ ಮಾಡುವ ಮತ್ತು ಆಡಳಿತ ಮಂಡಳಿ ನಿರ್ದೇಶಕರಾಗುವ ಹಕ್ಕನ್ನು ಮಾತ್ರ ಹೊಂದಿರುವುದಿಲ್ಲ. ಉಳಿದಂತೆ ಇನ್ನಿತರೆ ಎಲ್ಲಾ ಸೌಲಭ್ಯಗಳನ್ನು ಪಡೆಯಲು ಅರ್ಹತೆ ಹೊಂದಿರುತ್ತಾರೆ. ಗೃಹ ನಿರ್ಮಾಣ ಸಹಕಾರ ಸಂಘಗಳ ಸಮರ್ಪಕ ಕಾರ್ಯನಿರ್ವಹಣೆ ದೃಷ್ಟಿಯಿಂದ ನಿಬಂಧಕರು ತಮಗೆ ದತ್ತವಾದ ಅಧಿಕಾರದನ್ವಯ ಈ ಆದೇಶವನ್ನು ನೀಡಿರುತ್ತಾರೆ.

ವರ್ತುಲ ಹಾಗೂ ಸುವರ್ಣ ರಸ್ತೆ

961 (1122) ಶ್ರೀ ಬೆಳ್ಳುಳ್ಳಿ ಸಂಗಪ್ಪ ಕಲ್ಲಪ್ಪ (ಬಸವನ ಬಾಗೇವಾಡಿ) : ಮಾನ್ಯ ಲೋಕೋಪಯೋಗಿ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ಬಸವನ ಜನ್ಮಸ್ಥಳವಾದ ಬಸವನ ಬಾಗೇವಾಡಿಯಲ್ಲಿ ವರ್ತುಲ ರಸ್ತೆ ನಿರ್ಮಿಸುವ ಬಗ್ಗೆ ಸರಕಾರಕ್ಕೆ ವರದಿ ಬಂದಿದೆಯೇ, ಹಾಗಿದ್ದಲ್ಲಿ, ಸರ್ಕಾರ ಈ ವರದಿಯ ಮೇಲೆ ಕೈಗೊಂಡ ಕ್ರಮಗಳೇನು?

ಆ) ಬಿಜಾಪುರ ರಾಷ್ಟ್ರೀಯ ಹೆದ್ದಾರಿ–218ನ್ನು ಮೇಲ್ದರ್ಜೆಗೇರಿಸಿ, ಸುವರ್ಣ ರಸ್ತೆಯಾಗಿ ನಿರ್ಮಿಸುವ ವಿಷಯ ಸರ್ಕಾರದ ಗಮನಕ್ಕೆ ಬಂದಿದೆಯೇ, ಬಂದಿದ್ದಲ್ಲಿ, ಈ ಬಗ್ಗೆ ಸರ್ಕಾರ ಕೈಗೊಂಡ ಕ್ರಮವೇನು?

ಶ್ರೀ ಸಿ.ಎಂ. ಉದಾಸಿ (ಲೋಕೋಪಯೀಗಿ ಸಚಿವರು) :

ಅ) ಯಾವುದೇ ವರದಿ ಬಂದಿರುವುದಿಲ್ಲ.

ಆ) ಪ್ರಸ್ತಾವನೆ ಇರುವುದಿಲ್ಲ.

ತೋಟಗಾರಿಕೆ ಅಭಿವೃದ್ಧಿ

964 (1119) ಬಸವರಾಜ ಪಾಟೀಲ್ ಅಟ್ಟೂರು (ಬಸವ ಕಲ್ಯಾಣ) : ಮಾನ್ಯ ತೋಟಗಾರಿಕೆ ಮತ್ತು ಬಂಧಿಖಾನೆ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ಬೀದರ್ ಜಿಲ್ಲೆಯಲ್ಲಿ ತೋಟಗಾರಿಕಾ ಚಟುವಟಿಕೆಗಳಿಗೆ ಯಾವ್ಯಾವ ಉತ್ತೇಜನಗಳನ್ನು ನೀಡಲಾಗುತ್ತಿದೆ;

ಆ) ಬೀದರ್ ಜಿಲ್ಲೆಯನ್ನು ತೋಟಗಾರಿಕಾ ವಿಷನ್ ಯೋಜನೆ ಯಡಿಯಲ್ಲಿ ಸೇರಿಸಲಾಗಿದೆಯೇ; ಹಾಗಿದ್ದಲ್ಲಿ ಜಿಲ್ಲೆಗೆ ಇವರಿಂದಾಗುವ ಪ್ರಯೋಜನಗಳೇನು;

ಇ) ಬೀದರ್ ಜಿಲ್ಲೆಗೆ ಕಳೆದ ಮೂರು ವರ್ಷಗಳಲ್ಲಿ ತೋಟಗಾರಿಕಾ ಕ್ಷೇತ್ರದ ಉತ್ತೇಜನಕ್ಕಾಗಿ ಎಷ್ಟು ಹಣ ಯಾವ್ಯಾವ ಕಾರ್ಯಗಳಿಗೆ ಖರ್ಚು ಮಾಡಲಾಗಿದೆ;

ಈ) ಪ್ರಸಕ್ತ ಸಾಲಿನಲ್ಲಿ ಜಿಲ್ಲೆಯಲ್ಲಿ ತೋಟಗಾರಿಕೆ ಬೆಳೆಗಳನ್ನು ಅಭಿವೃದ್ಧಿಪಡಿಸಲು ರೂಪಿಸಿರುವ ಯೋಜನೆಗಳೇನು?

ಶ್ರೀ ಉಮೇಶ್ ವಿ. ಕತ್ತಿ (ತೋಟಗಾರಿಕೆ ಮತ್ತು ಬಂಧಿಖಾನೆ ಸಚಿವರು) :

ಅ) ಈ ಕೆಳಕಂಡ ಉತ್ತೇಜನಗಳನ್ನು ನೀಡಲಾಗುತ್ತಿದೆ.

1) ಬಹು ವಾರ್ಷಿಕ ಹಾಗೂ ವಾರ್ಷಿಕ ಹಣ್ಣಿನ ಬೆಳೆಗಳ ಹೊಸ ತೋಟಗಳ ಸ್ಥಾಪನೆಗೆ ಶೇ 75% ಸಹಾಯಧನ (ಮಾವು, ಸಪೋಟ, ದಾಳಿಂಬೆ, ನಿಂಬೆ, ಮೊಸಂಬಿ, ಬಾಳೆ, ದ್ರಾಕ್ಷಿ).

2) ನರ್ಸರಿಗಳ ಸ್ಥಾಪನೆಗೆ ಶೇ 50% ರಷ್ಟು ಸಹಾಯಧನ.

3) ತೋಟಗಾರಿಕೆ ಬೆಳೆಗಳಿಗೆ ಸಾವಯವ ಅಳವಡಿಕೆ ಶೇ. 50% ರಷ್ಟು ಸಹಾಯಧನ (ಎರೆಹುಳು ಘಟಕ, ಬಯೋಡೈಜಿಸ್ಟರ್).